# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 23.11.2011**

ಇಂದು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ದಕ್ಷಿಣ ವಲಯದ ಜಂಟಿ ಆಯುಕ್ತರು ಮತ್ತು ಆರೋಗ್ಯ ಇಲಾಖೆಯ ಸಿಬ್ಬಂದಿಯವರು ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಸುಮಾರು 6 ಬಾರ್ ಮತ್ತು ರೆಸ್ಟೋರೆಂಟ್‌ಗಳು, ರೆಸ್ಟೋರೆಂಟ್‌ಗಳು, ಕ್ಯಾಂಟೀನ್‌ಗಳು, ಚಾಟ್ಸ್ ಉದ್ದಿಮೆಗಳ ಮೇಲೆ ದಾಳಿ ನಡೆಸಿ, ಸುಮಾರು ಒಂದೂವರೆ ಲಕ್ಷಕ್ಕೂ ಮಿಗಿಲಾದ ಹುಕ್ಕಾ ಚಟುವಟಿಕೆಗೆ ಬಳಸುತ್ತಿದ್ದ ಸಾಮಗ್ರಿಗಳನ್ನು ಮತ್ತು ಗಾಂಜ ಹೊಗೆಸೊಪ್ಪು ಅದಕ್ಕೆ ಸಂಬಂಧಿಸಿದ ಫ್ಲೇವರ್‌ಗಳನ್ನು ಮುಟ್ಟುಗೋಲು ಹಾಕಿಕೊಂಡಿದ್ದಾರೆ. ಹುಕ್ಕಾ ಉದ್ದಿಮೆಯವರು ಆಹಾರ ಪದಾರ್ಥ ಮಾರಾಟ ಮಾಡುವುದಕ್ಕಾಗಿ ಉದ್ದಿಮೆ ಪರವಾನಗಿ ಪಡೆದು, ಇದೇ ಆವರಣದಲ್ಲಿ ಹುಕ್ಕಾ ಚಟುವಟಿಕೆಯನ್ನು ನಡೆಸುತ್ತಿರುವುದು ಕಂಡುಬಂದಿದ್ದು, ಈ ಸ್ಥಳಗಳಿಗೆ ಶಾಲಾ ಕಾಲೇಜು ವಿದ್ಯಾರ್ಥಿಗಳು ಭೇಟಿ ನೀಡುತ್ತಿರುವುದಾಗಿ ಸಾರ್ವಜನಿಕರಿಂದ ಮಾಹಿತಿ ಬಂದಿರುವ ಹಿನ್ನೆಲೆಯಲ್ಲಿ ದಾಳಿ ನಡೆಸಲಾಯಿತು ಎಂದು ಜಂಟಿ ಆಯುಕ್ತರು (ದಕ್ಷಿಣ) ರವರು ತಿಳಿಸಿದ್ದಾರೆ.

**ಸಾರ್ವಜನಿಕ ಸಂಪರ್ಕಾಧಿಕಾರಿ**